ವಿಧಾನ ಪರಿಷತ್ತು
ಸಂಯುಕ್ತ ಕರ್ನಾಟಕ

28/1/2021

# ಹೊರಟ್ಟಿ ಮೇಲ್ಮನೆ ಸಭಾಪತಿ ಖಚಿತ

28/1/21

ಸಂ.ಕ. ಸಮಾಚಾರ ಬೆಂಗಳೂರು

ನಿರೀಕ್ಷೆಯಂತೆಯೇ ವಿಧಾನಪರಿಷತ್ತಿನಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಮಾಡಿಕೊಂಡಿವೆ. ತೆರವಾಗಲಿರುವ ಸಭಾಪತಿ ಸ್ಥಾನಕ್ಕೆ ಜೆಡಿಎಸ್‌ನ ಬಸವರಾಜ ಹೊರಟ್ಟಿ ಹಾಗೂ ಉಪಸಭಾಪತಿ ಸ್ಥಾನಕ್ಕೆ ಬಿಜೆಪಿಯ ಎಂ.ಕೆ.ಪ್ರಾಣೇಶ್ ಅಭ್ಯರ್ಥಿಗಳಾಗುವುದು ಬಹುತೇಕ ಖಚಿತವಾಗಿದೆ.

ಹಾಲಿ ಸಭಾಪತಿ ಕೆ.ಪ್ರತಾಪ್‌ಚಂದ್ರಶೆಟ್ಟಿ ಅವರ ವಿರುದ್ಧ ಬಿಜೆಪಿ-ಜೆಡಿಎಸ್ ಜಂಟಿಯಾಗಿ ತಂದಿದ್ದ ಅವಿಶ್ವಾಸ ನಿರ್ಣಯಕ್ಕೆ ಸಂಬಂಧಿಸಿದಂತೆ ಮೇಲ್ಮನೆಯಲ್ಲಿ ಡಿಸೆಂಬರ್ 15ರಂದು ನಡೆದ ಗಲಭೆ ಪರಿಷತ್‌ಗೆ ಕಪ್ಪುಚುಕ್ಕೆ ತಂದಿಟ್ಟಿತ್ತು. ಇದೀಗ ಉಭಯ ಪಕ್ಷಗಳ ಮೈತ್ರಿ ಅಧಿಕೃತವಾಗಿದ್ದು ಸಭಾಪತಿ ಹಾಗೂ ಉಪಸಭಾಪತಿ ಸ್ಥಾನಗಳನ್ನು ಹಂಚಿಕೊಳ್ಳಲು

## ಎಂ.ಕೆ. ಪ್ರಾಣೇಶ್ ಉಪಸಭಾಪತಿ

ನಿರ್ಧರಿಸಿದೆ. ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠ ಹೆಚ್.ಡಿ.ದೇವೇಗೌಡ ಅವರು ಈ ಸಂಬಂಧ ಸಿಎಂ ಯಡಿಯೂರಪ್ಪ ಜೊತೆ ಸಮಾಲೋಚಿಸಿದ್ದರು. ಬುಧವಾರ ಬೆಳಿಗ್ಗೆ ಬಸವರಾಜ ಹೊರಟ್ಟಿ ಅವರು ಸಿಎಂ ಭೇಟಿಯಾಗಿ ಸಭಾಪತಿ ಸ್ಥಾನವನ್ನು ಖಾತರಿಪಡಿಸಿಕೊಂಡಿದ್ದರು. ಅಷ್ಟೇ ಅಲ್ಲ ಬಿಜೆಪಿ ವರಿಷ್ಠರ ಕೋರಿಕೆಯಂತೆ



ವೈಯಕ್ತಿಕ ಪರಿಚಯದ ಮಾಹಿತಿಯನ್ನೂ ದೆಹಲಿಗೆ ರವಾನಿಸಿರುವುದಾಗಿ ಮೇಲ್ಮನೆಯ ಅತ್ಯಂತ ಹಿರಿಯ ಸದಸ್ಯರಾದ ಹೊರಟ್ಟಿ ಅವರು ಮಾಹಿತಿ ನೀಡಿದ್ದರು.

ಇತ್ತ ಸಂಜೆ ಸಿಎಂ ಯಡಿಯೂರಪ್ಪ ಅವರು ತಮ್ಮ ನಿವಾಸ ಕಾವೇರಿಯಲ್ಲಿ ಬಿಜೆಪಿಯ ಮೇಲ್ಮನೆ ಸದಸ್ಯರ ಅನೌಪಚಾರಿಕ ಸಭೆ ನಡೆಸಿದರು. ಈ ವೇಳೆ ಸಭಾಪತಿ ಸ್ಥಾನಕ್ಕೆ ಸಂಬಂಧಿಸಿದಂತೆ ಈಗಾಗಲೇ ಆಗಿರುವ ವಿದ್ಯಮಾನಗಳ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದಾರೆ. ಜೊತೆಗೆ ಉಪಸಭಾಪತಿ ಸ್ಥಾನದ ಅಭ್ಯರ್ಥಿ ಯಾರಾಗಬೇಕೆಂಬ ಕುರಿತು ಚರ್ಚಿಸಿದ್ದಾರೆ. ಹಲವು ಮಂದಿ ಆಕಾಂಕ್ಷಿಗಳಿದ್ದರೂ ಆರ್‌ಎಸ್‌ಎಸ್ ಹಿನ್ನೆಲೆಯ ಎಂ.ಕೆ.ಪ್ರಾಣೇಶ್ ಅವರನ್ನು



### ಜೆಡಿಎಸ್ ಬಣ್ಣ ಬಯಲು

ಮೇಲ್ಮನೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಏರ್ಪಟ್ಟಿರುವ ಹಿನ್ನೆಲೆಯಲ್ಲಿ ವಿಧಾನಸಭೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದು, 'ಜೆಡಿಎಸ್‌ನವರ ಬಣ್ಣ ಬಯಲಾಗಿದೆ, ಜಾತ್ಯತೀತ ತತ್ವದ ಮುಖವಾಡ ಕಳಚಿದೆ' ಎಂದು ಟೀಕಿಸಿದ್ದಾರೆ.

ಅಚ್ಚರಿ ಆಯ್ಕೆಯಾಗಿ ಅಂತಿಮಗೊಳಿಸಲಾಗಿದೆ.

ಇಂದಿನಿಂದ ಆರಂಭವಾಗಲಿರುವ ಜಂಟಿ ಅಧಿವೇಶನದ ಕಾರ್ಯಸೂಚಿಯಂತೆ ಜನವರಿ 29 ರಂದು ಉಪಸಭಾಪತಿ ಚುನಾವಣೆ ನಿಗದಿಯಾಗಿರುವ ಹಿನ್ನೆಲೆಯಲ್ಲಿ ಗುರುವಾರವೇ ಪ್ರಾಣೇಶ್ ಅವರು ನಾಮಪತ್ರ ಸಲ್ಲಿಸಲಿದ್ದಾರೆ. ಈ ಹಿಂದೆ ಉಪಸಭಾಪತಿಯಾಗಿದ್ದು ಆತ್ಮಹತ್ಯೆಗೆ ಶರಣಾಗಿದ್ದ ಎಸ್.ಎಲ್.ಧರ್ಮೇಗೌಡ ಅವರೂ ಚಿಕ್ಕಮಗಳೂರು ಜಿಲ್ಲೆಯವರೇ ಆಗಿದ್ದರೆಂಬುದು ವಿಶೇಷ.